49

## ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ:ವೈ.ಎ.ನಾರಾಯಣಸ್ವಾಮಿ ಇವರು ನಿಯಮ 72ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

*****

**ಸೂಚನೆ: ಕರ್ನಾಟಕ ರಾಜ್ಯದಲ್ಲಿ ಸರ್ಕಾರದ ವಿರುದ್ಧ ಬೇರೆ ಬೇರೆ ಇಲಾಖೆಗಳಿಗೆ ಸಂಬಂಧಿಸಿದಂತೆ, ಸಾವಿರಾರು ದಾವೆಗಳು ವಿವಿಧ ಹಂತದ ನ್ಯಾಯಾಲಯದಲ್ಲಿ ದಶಕಗಳಿಂದ ಬಾಕಿ ಇದ್ದು, ಇದರಿಂದ ಆಡಳಿತ ವ್ಯವಸ್ಥೆಗೆ ಭಾರಿ ಹಿನ್ನೆಡೆ, ಮುಜುಗುರ ಹಾಗೂ ಆರ್ಥಿಕ ನಷ್ಟ ಉಂಟಾಗಿರುವುದು ಸರಿಯಷ್ಟೆ. ಇಂತಹ ಪ್ರಕರಣಗಳ ತ್ವರಿತ ವಿಲೇವಾರಿಗೆ, ಆರ್ಥಿಕ ನಷ್ಟ ತಪ್ಪಿಸಲು ಮತ್ತು ನಾಗರೀಕರಲ್ಲಿ ಇಲಾಖೆಯ ಗೌರವವನ್ನು ಹೆಚ್ಚಿಸಲು ಕಾನೂನು ಇಲಾಖೆಯು ಕೈಗೊಳ್ಳುವ ಕ್ರಮಗಳ ಬಗ್ಗೆ ಚರ್ಚಿಸಲು ಮಾನ್ಯ ಕಾನೂನು ಸಚಿವರ ಗಮನಸೆಳೆಯಬಯಸುತ್ತೇನೆ.**

**ಉತ್ತರ:**

ರಾಜ್ಯದಲ್ಲಿ ಕಾನೂನು ನ್ಯಾಯಾಲಯಗಳು ಮತ್ತು ಶಾಸನಬದ್ಧ ನ್ಯಾಯಮಂಡಳಿಗಳ ಮುಂದೆ ಸರ್ಕಾರಿ ವ್ಯಾಜ್ಯಗಳನ್ನು ನಿರ್ವಹಿಸುವ ವಿಷಯದಲ್ಲಿ ಸಮರ್ಥ ಮತ್ತು ಜವಾಬ್ದಾರಿಯುತ ನಡವಳಿಕೆಯನ್ನು ಕಾನೂನಿನ ಮೂಲಕ ಖಚಿತಪಡಿಸಿಕೊಳ್ಳುವ ಸಲುವಾಗಿ ಕರ್ನಾಟಕ ಸರ್ಕಾರಿ ವ್ಯಾಜ್ಯಗಳ ನಡವಳಿಕೆ ಕಾಯಿದೆ, 2023ನ್ನು ಜಾರಿಗೊಳಿಸಲು ಸರ್ಕಾರದ ಹಂತದಲ್ಲಿ ನಿರ್ಣಯಿಸಲಾಗಿದೆ ಅದರಂತೆ, The Karnataka Conduct of Government Litigation Act, 2023 ವಿಧೇಯಕವನ್ನು ಸಿದ್ಧಪಡಿಸಲಾಗಿದೆ. ಈ ವಿಧೇಯಕಕ್ಕೆ ಸಚಿವ ಸಂಪುಟದ ಅನುಮೋದನೆ ಪಡೆಯಲು ಕ್ರಮ ವಹಿಸಲಾಗುತ್ತಿದೆ. ಈ ಬಗ್ಗೆ ಶೀಘ್ರದಲ್ಲಿಯೇ ಸಚಿವ ಸಂಪುಟದ ಅನುಮೋದನೆ ಪಡೆದು ಸದರಿ ಕಾಯ್ದೆಯನ್ನು ಜಾರಿಗೊಳಿಸಲಾಗುವುದು. ವಿಧಾನ ಮಂಡಲದ ಅಂಗೀಕಾರಕ್ಕೆ ಮಂಡಿಸಲು ಉದ್ದೇಶಿಸಲಾಗಿದೆ.

ಮುಂದುವರಿದು, ವಿಶೇಷವಾಗಿ ಬಡತನ / ಅಡಚಣೆಯಲ್ಲಿರುವ ನ್ಯಾಯ ಅಪೇಕ್ಷಿತ ಜನರಿಗೆ ನ್ಯಾಯ ದೊರಕಿಸಲು ಸಕಾಲಿಕ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಬಡವರ ಪ್ರಕರಣಗಳಲ್ಲಿ ನ್ಯಾಯದಾನ ವಿಳಂಬ ತಪ್ಪಿಸಲು ಬಡವರ ವ್ಯಾಜ್ಯಗಳನ್ನು ಆದ್ಯತೆಯ ಮೇಲೆ ವಿಲೇವಾರಿ ಮಾಡಲು ನಾಗರೀಕ ಪ್ರಕ್ರಿಯಾ ಸಂಹಿತೆ (CPC)ಗೆ ತಿದ್ದುಪಡಿ ತರಲು ಉದ್ದೇಶಿಸಲಾಗಿದ್ದು, ನಾಗರೀಕ ಪ್ರಕ್ರಿಯಾ ಸಂಹಿತೆಗೆ (CPC) ಸೂಕ್ತ ತಿದ್ದುಪಡಿ ತರಲಾಗುವುದು.

ಸಂಖ್ಯೆ: ಲಾ-ಎಲ್‌ಎಸಿ/103/2023

(ಹೆಚ್.ಕೆ.ಪಾಟೀಲ್)
ಕಾನೂನು, ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು.